PW - 1

ದಿನಾಂಕಃ 17.09.2025 ರಂದು ಸಾಕ್ಷಿಗೆ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದ -

ನಾನು ಪದವಿ ವ್ಯಾಸಂಗ ಮಾಡಿದ್ದೇನೆ. ನಾನು ನ್ಯಾಯಾಲಯಕ್ಕೆ ಸಲ್ಲಿಸಿದ ಪೊಲೀಸ್ ದಾಖಲೆಗಳನ್ನು ಓದಿ ತಿಳಿದುಕೊಂಡಿದ್ದೇನೆ. ಅಂತಿಮ ವರದಿಯಲ್ಲಿ ಕಾರಿನ ಚಾಲಕನಿಗೆ ಡಿ ಎಲ್ ಇಲ್ಲ ಎಂದು ನಮೂದು ಮಾಡಿದ್ದಾರೆ ಎಂದರೆ ಸರಿ. ಸದರಿ ವರದಿ ಸುಳ್ಳು ಎಂದು ನಾನು ಹೇಳಿರುವುದಿಲ್ಲ ಎಂದರೆ ಸರಿ. ತಾಃ 5.11.2022 ರಂದು ಕೆಎ 16 ಪಿ 0017 ವಾಹನದಿಂದ ಅಪಘಾತವಾಗಿದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತವು ಈ ವಾಹನದ ಚಾಲಕನ ತಪ್ಪಿನಿಂದ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ತೀವ್ರತರವಾದ ಗಾಯಗಳಾಗಿದೆ ಮತ್ತು ಅದಕ್ಕೆ ಚಿಕಿತ್ಸೆ ಪಡೆದು 50 ಸಾವಿರ ಖರ್ಚು ಮಾಡಿದ್ದೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಕ್ರೀಡಾ ಮತ್ತು ಸಾಂಸ್ಕೃತಿ ಸ್ಪರ್ದೆಯಲ್ಲಿ ಭಾಗವಹಿಸುತ್ತಿದ್ದೆ ಅಪಘಾತದ ಗಾಯಗಳಿಂದ ಅದಕ್ಕೆ ತೊಂದರೆ ಆಗಿದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 2 ನೇ ಎದುರುದಾರರು ಪರಿಹಾ ನೀಡಬೇಕು ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ತಿಪ್ಪೇಸಿ ಎನ್ನುವವರ ಬೈಕಿನಲ್ಲಿ ನಾನು ಪ್ರಯಾಣಿಸುತ್ತಿದ್ದೆ ಎಂದರೆ ಸರಿ. ಅವರ ತಪ್ಪಿನಿಂದಲೇ ಅಪಘಾತವಾಗಿದ್ದರೂ ಪರಿಹಾರ ಪಡೆಯುವ ಸಲುವಾಗಿ ಕಾರಿನ ಮೇಲೆ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಬಹಿರಂಗ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ.ಸ.ಇದೆ.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ
ನ್ಯಾಯಾಲಯ, ದಾವಣಗೆರೆ